# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 429

ಸದಸ್ಯರ ಹೆಸರು : ಶ್ರೀಮತಿ ಎಸ್.ವೀಣಾ ಅಚ್ಚಯ್ಯ
(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 12.12.2018

ಉತ್ತರಿಸುವವರು : ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು

*****

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಹಾಗೂ ಭೂಕುಸಿತದಿಂದ ಹಾನಿಗೀಡಾದ ಅರಣ್ಯದ ವಿಸ್ತೀರ್ಣವೆಷ್ಟು; | ಕೊಡಗು ಅರಣ್ಯ ವೃತ್ತ ವ್ಯಾಪ್ತಿಯಲ್ಲಿ ಅಂದಾಜು 45.00 ಹೆಕ್ಟೇರ್ ವಿಸ್ತೀರ್ಣದ ಅರಣ್ಯ ಪ್ರದೇಶ ಪ್ರವಾಹ ಹಾಗೂ ಭೂ ಕುಸಿತದಿಂದಾಗಿ ಹಾನಿಗೀಡಾಗಿರುತ್ತದೆ. |
| ಆ) | ಸದರಿ ಹಾನಿಗೀಡಾದ ಅರಣ್ಯವನ್ನು ಪುನಃಶ್ಚೇತನ ಅಥವಾ ಪುನರ್ ನಿರ್ಮಾಣ ಮಾಡಲು ಇಲಾಖೆ ಇದುವರೆಗೂ ಕೈಗೊಂಡಿರುವ ಕ್ರಮಗಳೇನು; | ಸದರಿ ಹಾನಿಗೀಡಾದ ಪ್ರದೇಶಗಳಲ್ಲಿ ಕೆಲವೊಂದು ಪ್ರದೇಶಗಳಲ್ಲಿ ಪುನರ್ ನಿರ್ಮಾಣಕ್ಕಾಗಿ ಯೋಜನೆಗಳನ್ನು ರೂಪಿಸಿ ಕ್ರಮಕೈಗೊಳ್ಳಲಾಗುವುದು ಹಾಗೂ ಇದರಲ್ಲಿ ಕೆಲವು ಪ್ರದೇಶವು ಬೆಟ್ಟದ ಮತ್ತು ಕಡಿದಾದ ಪ್ರದೇಶವಾಗಿದ್ದು, ಇವುಗಳಲ್ಲಿ ನೆಡುತೋಪು ನಿರ್ಮಾಣ ಹಾಗೂ ಪುನರ್ ಅರಣ್ಯೀಕರಣ ಕೈಗೊಳ್ಳಲು ಕಷ್ಟಕರವಾಗಿರುತ್ತವೆ. ಇಂತಹ ಅರಣ್ಯ ಪ್ರದೇಶಗಳಲ್ಲಿ ಬೀಜ ಬಿತ್ತನೆ ಮತ್ತು ಮಣ್ಣು ಸವಕಳಿ / ಕೊರೆತ ಇರುವ ಜಾಗದಲ್ಲಿ ಗಲ್ಲಿಚೆಕ್ಸ್ ನಿರ್ಮಾಣ ಕೈಗೊಳ್ಳಲಾಗುವುದು. |
| ಇ) | ಹಾನಿಗೀಡಾದ ಅರಣ್ಯದ ಪುನರ್‌ನಿರ್ಮಾಣಕ್ಕೆ ಇಲಾಖೆ ವಿಶೇಷ ಅನುದಾನ ಒದಗಿಸಿ, ಕಾರ್ಯಕ್ರಮಗಳನ್ನು ಯಾವ ಕಾಲಮಿತಿಯೊಳಗೆ ಅನುಷ್ಠಾನಗೊಳಿಸುವುದು? | ಹಾನಿಗೀಡಾದ ಅರಣ್ಯ ಪ್ರದೇಶದ ಪುನರ್ ನಿರ್ಮಾಣ ಕಾರ್ಯಕೈಗೊಳ್ಳಲು ಮುಂದಿನ 2 ಆರ್ಥಿಕ ವರ್ಷಗಳಲ್ಲಿ ಹಂಚಿಕೆಯಾಗುವ ಅನುದಾನದಲ್ಲಿ ಅದ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಅಪಜೀ 170 ಎಫ್‌ಎಫ್ 2018

(ಆರ್.ಶಂಕರ್)
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು